# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **106** |
| ಸದಸ್ಯರ ಹೆಸರು | : | ಶ್ರೀ ಸುನೀಲ್ ವಲ್ಯಾಪುರ್,<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | **14.02.2024** |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ಕೃಷಿ ಜಮೀನನ್ನು ಕೃಷಿಯೇತರಗೊಳಿಸಲು ಅನುಸರಿಸುತ್ತಿರುವ ಕಾನೂನು ಮತ್ತು ನಿಯಮಗಳೇನು; (ಮಾಹಿತಿ ನೀಡುವುದು) | ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಗಳಿಗೆ ಭೂ ಪರಿವರ್ತಿಸುವ ವಿಧಾನವನ್ನು ಸರಳೀಕರಣಗೊಳಿಸಿ, ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95ಗೆ ತಿದ್ದುಪಡಿ ತಂದು 120 ದಿನಗಳ ಬದಲಾಗಿ ಮಾಸ್ಟರ್ ಪ್ಲಾನ್ ಪ್ರಕಟಿಸಿದ ಪ್ರದೇಶದಲ್ಲಿ ಅರ್ಜಿಸಲ್ಲಿಸಿದ 7 ದಿನಗಳೊಳಗಾಗಿ ಹಾಗೂ ಉಳಿದ ಪ್ರದೇಶದಲ್ಲಿ 30 ದಿನಗಳೊಳಗಾಗಿ ಭೂ ಪರಿವರ್ತನಾ ಆದೇಶ ನೀಡಲು ಅವಕಾಶ ಕಲ್ಪಿಸಲಾಗಿದೆ |
| ಆ) | ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ 1961ರ ಮೇರೆಗೆ ಸಂಬಂಧಪಟ್ಟ ಭೂಮಿಯ ಸಂಬಂಧದಲ್ಲಿ ಯುಕ್ತವಾಗಿ ಪ್ರಕಟಿಸಲಾದ ಮಾಸ್ಟರ್ ಪ್ಲಾನ್‌ನಲ್ಲಿ ನಿರ್ದಿಷ್ಟಪಡಿಸಿದ ಬಳಕೆಗೆ ಅನುಸಾರವಾಗಿ ಅಂಥ ಭೂಮಿಯ ಕಂದಾಯ ನಿರ್ಧರಣೆಯಾಗಿದ್ದು ಅಥವಾ ಕೃಷಿ ಉದ್ದೇಶಕ್ಕಾಗಿ ಹೊಂದಿದ್ದಲ್ಲಿ ಕೃಷಿಯೇತರ ಉದ್ದೇಶಗಳಿಗಾಗಿ ಭೂ ಪರಿವರ್ತನೆಗೆ ಜಿಲ್ಲಾಧಿಕಾರಿಗಳ ಅನುಮತಿಯ ಅಗತ್ಯವಿರುವುದಿಲ್ಲವೆಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆಯೇ; (ಮಾಹಿತಿ ನೀಡುವುದು) | ಹೌದು. ಪ್ರಕಟಿಸಲಾಗಿದೆ. ಆದರೆ, ಸದರಿ ಅಧಿನಿಯಮವು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು ಎಂದು ತಿಳಿಸಲಾಗಿದೆ. ಸದರಿ ಅಧಿಸೂಚನೆಯನ್ವಯ ನಿಯಮಗಳನ್ನು ರೂಪಿಸಲಾಗುತ್ತಿದೆ. |
| ಇ) | ಹಾಗಾದಲ್ಲಿ, ಅದರಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶನ/ಮಾರ್ಗ ಸೂಚಿಗಳನ್ನು ನೀಡಲಾಗಿದೆಯೇ; ಇಲ್ಲದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು? (ವಿವರ ಒದಗಿಸುವುದು) | ಸದರಿ ಅಧಿಸೂಚನೆಯು ಜಾರಿಗೆ ತರದೇ ಇರುವುದರಿಂದ ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶನ / ಮಾರ್ಗಸೂಚಿಗಳನ್ನು ನೀಡಿರುವುದಿಲ್ಲ. |

ಸಂಖ್ಯೆ: ಆರ್‌ಡಿ 10 ಎಲ್‌ಜಿಕ್ಯೂ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು